ಬರವಣಿಗೇ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಬಡ್ಡೀ ಯಾ ಇತರ ಖರ್ಚುಗಳು ದೇವೀಲ್ ಕಂದಾಯದ ಬಾಕೀ ಮೊಬಲಗನ್ನು ಪೂರಾ ಹಾಜರ್ ಮಾಡಿದರೆ, ಹರಾಜು ಮುವ್ತುಕೂಫ್ ಮಾಡಲ್ಪಡತಕ್ಕದ್ದು. ಪರಂತು ಹರಾಜಿಗೆ ಗೊತ್ತಾದ ದಿನಕ್ಕೆ ಹಿಂದಿನ ದಿನದ ಸೂರ್ಯಾಸ್ತಮಯಕ್ಕೆ ಮುಂಚಿತವಾಗಿ ಸದರೀ ಹಣ ಹಾಜರ್ ಮಾಡತಕ್ಕದ್ದು.

7. ದಿವಾನರವರಿಂದ ಮುಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಕಾಯಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತೀ ಮಾಡಿ, ಹರಾಜನ್ನು ದಿವಾನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಫರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಸಬ್ ಡಿವೀಜ್ ಆಫೀಸರವರಿಂದ ರುಜೂ ಮೊಹರ್ ಮಾಡೋಣಾದ ಬಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಸೀಲ್‌ನಲ್ಲಾಗಲಿ ಅಂದಾಜು ಬೀಜವರಿ ವಿಷಯದಲ್ಲಾಗಲಿ ಇರುವ ಗಲ್ಲತ್‌ಗಳಿಗೆ ಸರ್ಕಾರದವರು ಜವಾಬ್‌ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನ ಪಟ್ಟಂತೆ ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲ್‌ನಲ್ಲಿ ಆಗುವ ಆಖೈರ್ ಹುಕ್ಕುಮಿಗೆ ಸದರೀ ಕ್ರಯವು ಬಳಪಟ್ಟು ಯಿರುತ್ತೆ.

ತಿಪ್ಪಟ್ಟೂರು. ತಾಲ್ಲೂಕು. ಹೊನ್ನಾಳಿ.	ಗ್ರಾಮ.	ಜೋಡಿದಾರರ ಹೆಸರು.	ಅಂದಾಜಾ ಬೀಜವರೀ.	ಅಂದಾಜಾ ಹುರಕಾರ್‌ಕ್ಕೆ ಕೊಟ್ಟುವಳೀ ಯಾಡಬೇಕಾದ ಕ್ವಿಜೇರೀಜು.	ಸಾಲಿಯಾನಾ ಸ್ಕೆಟ್‌ಮೆಂಟ್.	ಯಾವಬಾಕೀಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂಥಾ ಸರಕಾರದ ಕಂದಾಯದ ಬಾಕೀ.	ಹರಾಜು ತಾರೀಖು ವಗ್ಗೈರೆ.
ಸೈಸೂರು. ಅತ್ತಿಕಾವಲ್ಲು. ಸೆಂಪಿಗೆಹಳ್ಳಿ.	ದೊಡ್ಡಸೋಮನಹಳ್ಳಿ.	ತಿಮ್ಮಯ್ಯ ವಗ್ಗೈರೆ.	ಎ. ಗುಂ. ಗ. 349 17 0	ರೂ. ಅ. ಪೈ. 221 0 7	ರೂ. ಅ. ಪೈ. 223 14 9	ರೂ. ಅ. ಪೈ. 83 13 10	ಸ್ ೧೮೮೭ನೇ ಇಸವಿ ಆಗಸ್ಟ್ ತಾರೀಖು 31ರಲ್ಲು ತಾಲ್ಲೂಕು ಕಚೇರಿಯಲ್ಲಿ ಅಮಲ್ದಾರ್ರ ರೂಬರು.

ಹುಕ್ಕುಂ ಬಮೋಜೀಬ್,

ಆರ್. ವಿಜಯೀಂದ್ರರಾವ್,

ಚೀಫ್ ಸೆಕ್ರಟೇರಿ.